ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು – 560001**

ಸಂಖ್ಯೆ:ಸಿ7[2]ಪ್ರಾಶಿಅ.ಮ.ಸು.09/2017-18 ದಿನಾಂಕ:24-05-2017

**ಸುತ್ತೋಲೆ**

ವಿಷಯ: ರಾಜ್ಯದ ಶಾಲೆಗಳಲ್ಲಿ ಅಧ್ಯಯನ ಮಾಡುತ್ತಿರುವ ಮಕ್ಕಳು ಲೈಂಗಿಕ ದೌರ್ಜನ್ಯಕ್ಕೆ ಒಳಗಾದಲ್ಲಿ ಅವರು ಶೀಘ್ರವಾಗಿ ಸಾಮಾನ್ಯ ಜೀವನಕ್ಕೆ ಹೊಂದಿಕೊಂಡು ಶಾಲೆಗಳಿಗೆ ಹಾಜರಾಗಲು ಅಗತ್ಯ ಕ್ರಮಕೈಗೊಳ್ಳುವ ಕುರಿತು.

ಉಲ್ಲೇಖ: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು. [ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ] ಶಿಕ್ಷಣ ಇಲಾಖೆ, ಬೆಂಗಳೂರು-1 ರವರ ಅರೆ ಸರ್ಕಾರಿ ಪತ್ರ ಸಂಖ್ಯೆ:ಇಡಿ.58. ಮಾಹಿತಿ. 2016, ದಿನಾಂಕ:22-4-2017

******

ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ಕಾಯಿದೆ-2009 ಹಾಗೂ ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ನಿಯಮಗಳು-2012 ಕರ್ನಾಟಕ ರಾಜ್ಯದಲ್ಲಿ 2012-13ನೇ ಶೈಕ್ಷಣಿಕ ಸಾಲಿನಿಂದ ಜಾರಿಗೆ ಬಂದಿರುತ್ತದೆ. ಕಡ್ಡಾಯ ಶಿಕ್ಷಣ ಕಾಯಿದೆಯಡಿ ಪ್ರತಿ ಮಗುವಿಗೂ ಸಮಾಧಾನಕರ ಹಾಗೂ ಗುಣಮಟ್ಟ ಶಿಕ್ಷಣವನ್ನು ನೀಡಬೇಕಿರುತ್ತದೆ.

ಇತ್ತೀಚಿನ ದಿನಗಳಲ್ಲಿ ಶಾಲಾ ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯದಂತಹ ಪ್ರಕರಣಗಳು ಆತಂಕಕಾರಿ ಬೆಳವಣಿಗೆಗಳು ಆಗಿದ್ದು, ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ಲೈಂಗಿಕ ದೌರ್ಜನ್ಯಕ್ಕೊಳಗಾದ ಮಕ್ಕಳು ಬಹುಕಾಲ ತಾವು ಅಧ್ಯಯನ ಮಾಡುತ್ತಿದ್ದ ಶಾಲೆಗಳಿಗೆ ಹಾಜರಾಗುವುದಿಲ್ಲವೆಂಬ ಬಗ್ಗೆ ಕಳವಳವನ್ನು ವ್ಯಕ್ತಪಡಿಸಿರುತ್ತದೆ.

ಇಂತಹ ಮಕ್ಕಳನ್ನು ಶೀಘ್ರವಾಗಿ ಸಾಮಾನ್ಯ ಸ್ಥಿತಿಗೆ ಮರುಕಳಿಸುವಂತೆ ಹಾಗೂ ಶೀಘ್ರವಾಗಿ ಶಿಕ್ಷಣವನ್ನು ಮುಂದುವರೆಸಲು ಎಲ್ಲಾ ರೀತಿಯ ಕ್ರಮಗಳನ್ನು ಶಾಲಾ ಮುಖ್ಯಸ್ಥರು, ಶಿಕ್ಷಕರು ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಗಮನಹರಿಸಿ ಎಲ್ಲಾ ಅಗತ್ಯ ಕ್ರಮ ಕೈಗೊಳ್ಳಬೇಕಿರುತ್ತದೆ.

ಶಾಲಾ ಮಕ್ಕಳ ಸುರಕ್ಷತೆ ಕುರಿತಂತೆ ಸರ್ಕಾರದ ಆದೇಶ ಸಂಖ್ಯೆ: ಮಮಇ.259.ಮಾಭಬ.2014, ದಿನಾಂಕ: 30-04-2015 ರಲ್ಲಿ ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ-2016ನ್ನು ಜಾರಿಗೆ ತಂದಿರುತ್ತದೆ.

ಲೈಂಗಿಕ ಅಪರಾದಗಳಿಂದ ಮಕ್ಕಳ ರಕ್ಷಣಾ ಕಾಯ್ದೆ-2012(POCSO) ಕೇಂದ್ರದ ಕಾಯ್ದೆಯಾಗಿದ್ದು, ಮಕ್ಕಳ ವಿರುದ್ಧದ ಲೈಂಗಿಕ ಅಪರಾದವೂ ಸೇರಿದಂತೆ ಲೈಂಗಿಕ ಹಿಂಸೆ, ಲೈಂಗಿಕ ಕಿರುಕುಳ ಮತ್ತು ಅಶ್ಲೀಲ ಚಿತ್ರಗಳ ಪ್ರದರ್ಶನ ಇತ್ಯಾದಿಗಳ ನಿವಾರಣೆ ಮತ್ತು ಅವುಗಳಿಗೆ ಕ್ರಮವಹಿಸಬಹುದಾಗಿದೆ. ಸದರಿ ಕಾಯ್ದೆಯಲ್ಲಿ ಪ್ರತಿಯೊಂದು ದೌರ್ಜನ್ಯ/ಅಪರಾದವನ್ನು ವ್ಯಾಖ್ಯಾನಿಸುವುದರೊಂದಿಗೆ ಶಿಕ್ಷಾರ್ಹ ಅಪರಾದಗಳನ್ನು ಗುರುತಿಸಲಾಗಿದೆ ಹಾಗೂ ಪ್ರತಿಯೊಬ್ಬ ಬಾಗೀದಾರರ ಪಾತ್ರಗಳು ಪ್ರಕ್ರಿಯೆಗಳು ಮತ್ತು ಅವಕಾಶಗಳನ್ನು ಸಹ ಸ್ಪಷ್ಟವಾಗಿ ವಿವರಿಸಲಾಗಿದೆ.

POCSO ಕಾಯ್ದೆಯ ಕಲಂ 19 ರಲ್ಲಿ ಮಗು ಲೈಂಗಿಕ ದೌರ್ಜನ್ಯಕ್ಕೆ ಒಳಗಾಗಿರುವ ಬಗ್ಗೆ ಶಿಕ್ಷಣ ಸಂಸ್ಥೆಯಲ್ಲಿನ ವ್ಯಕ್ತಿಗಳು ಸೇರಿದಂತೆ ಯಾವುದೇ ವ್ಯಕ್ತಿಗೆ ತಿಳಿದುಬಂದಲ್ಲಿ ಅಥವಾ ಅನುಮಾನ ಹೊಂದಿದಲ್ಲಿ ಮಾಹಿತಿಯನ್ನು ಕೂಡಲೇ ಮಕ್ಕಳ ವಿಶೇಷ ಪೊಲೀಸ್ ಘಟಕ (SJPU) ಕ್ಕೆ ಮತ್ತು ಇದರ ಅನುಪಸ್ಥಿತಿಯಲ್ಲಿ ಸಮೀಪದ ಪೊಲೀಸ್ ಠಾಣೆಗೆ ವರದಿ ಮಾಡುವಂತೆ ಕಡ್ಡಾಯಗೊಳಿಸಲಾಗಿದೆ.

ಆದುದರಿಂದ ಸರ್ಕಾರಿ ಅಥವಾ ಖಾಸಗಿ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿ ಅಥವಾ ಯಾವುದೇ ಮಂಡಳಿಯೊಂದಿಗೆ ಸಂಯೋಜಿತವಾಗಿರುವ, ಅನುದಾನಿತ ಅಥವಾ ಅನುದಾನರಹಿತ, ಯಾವುದೇ ಟ್ರಸ್ಟ್‌ಗಳು,

250



ಅಲ್ಪಸಂಖ್ಯಾತ ಸಂಸ್ಥೆಗಳು ಮುಂತಾದವುಗಳ ಬೋಧಕ ಅಥವಾ ಬೋಧಕೇತರ ಸಿಬ್ಬಂದಿಗಳು ಅಥವಾ ಆಡಳಿತ ಮಂಡಳಿಯು ಶಾಲೆಯ ಒಳಗೆ ಅಥವಾ ಹೊರಗೆ ಯಾವುದೇ ವ್ಯಕ್ತಿ ಮಗುವಿನ ಮೇಲೆ ಲೈಂಗಿಕ ಹಲ್ಲೆ ನಡೆಸಿರುವುದು ತಿಳಿದುಬಂದಲ್ಲಿ ಅಥವಾ ಸಂದೇಹವುಂಟಾದಲ್ಲಿ ಕಡ್ಡಾಯವಾಗಿ ವರದಿ ಮಾಡುವುದು ಅಗತ್ಯವಾಗಿರುತ್ತದೆ.

ಲೈಂಗಿಕ ದೌರ್ಜನ್ಯಕ್ಕೆ ಒಳಗಾದ ಮಕ್ಕಳಿಗೆ ಮಕ್ಕಳ ಸಹಾಯವಾಣಿ-1098ಯ ಮೂಲಕ ಮನೋ-ಸಾಮಾಜಿಕ ಆಪ್ತಸಮಾಲೋಚನೆಯ ನೆರವನ್ನು ಪಡೆಯಬಹುದಾಗಿದೆ. ಮನೋ-ಸಾಮಾಜಿಕ ಆಪ್ತಸಮಾಲೋಚನೆಯ ನೆರವನ್ನು ನಿಮಾನ್ಸ್ / ರಾಜ್ಯದಲ್ಲಿನ ಹೆಸರಾಂತ ಮತ್ತು ಅಧಿಕೃತ ಮಾನಸಿಕ ಆರೋಗ್ಯ ಸಂಸ್ಥೆಗಳಿಂದ ಸೇವೆ ಪಡೆಯುವುದು. ಲೈಂಗಿಕ ದೌರ್ಜನ್ಯಕ್ಕೆ ಒಳಗಾದ ಮಕ್ಕಳು ಸಹಜ ಸ್ಥಿತಿಗೆ ಬರುವಂತೆ ಕ್ರಮವಹಿಸುವುದು.

ಇಂತಹಾ ದೌರ್ಜನ್ಯ ಪ್ರಕರಣಗಳಿಗೆ ಒಳಪಟ್ಟ ಮಕ್ಕಳು ಶೀಘ್ರವಾಗಿ ಸಾಮಾನ್ಯ ಜೀವನಕ್ಕೆ ಹೊಂದಿಕೊಂಡು ಶೈಕ್ಷಣಿಕ ಪ್ರಗತಿಗೆ ಕುಂಠಿತವಾಗದಂತೆ ಶಾಲೆಗೆ ಹಾಜರಾಗಿ ಎಲ್ಲಾ ಮಕ್ಕಳಂತೆ ಶಾಲೆಯಲ್ಲಿ ಅಧ್ಯಯನವನ್ನು ಮುಂದುವರೆಸಲು ತಾಲ್ಲೂಕು ಮಟ್ಟದ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಶಾಲಾ ಮುಖ್ಯಸ್ಥರು, ಶಾಲಾ ಆಡಳಿತ ಮಂಡಳಿಯವರು ಹಾಗೂ ಶಾಲಾ ಶಿಕ್ಷಕರು ಎಲ್ಲಾ ಕ್ರಮಗಳನ್ನು ಅನುಸರಿಸಿ ಮಕ್ಕಳು ಮಾನಸಿಕ ಖಿನ್ನತೆಗೆ ಒಳಗಾಗದಂತೆ ಆತ್ಮ ಸ್ಥೈರ್ಯ ತುಂಬಿ ಶಾಲೆಗೆ ಹಾಜರಾಗಿ ಗುಣಾತ್ಮಕ ಶಿಕ್ಷಣವನ್ನು ಪಡೆಯಲು ಎಲ್ಲಾ ಅಗತ್ಯ ಕ್ರಮವಹಿಸಲು ತಿಳಿಸಿದೆ. ಈ ಸಂಬಂಧ ಜಿಲ್ಲಾ ಉಪನಿರ್ದೇಶಕರು ಮಾರ್ಗದರ್ಶನ ನೀಡಿ ಅನುಪಾಲನೆ ಮಾಡುವಂತೆ ತಿಳಿಸಿದೆ.

(ಸಾಲ್ಯ, ಭಾ.ಆ.ಸೇ)
ಆಯುಕರು
24/3/17

**ಇವರಿಗೆ,**

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗಳಿಗೆ ಸೂಕ್ತ ಕ್ರಮಕ್ಕಾಗಿ.

**ಪ್ರತಿಯನ್ನು:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ(ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು ರವರ ಮಾಹಿತಿಗಾಗಿ.
2. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ಬೆಂಗಳೂರು ರವರಿಗೆ ಮಾಹಿತಿಗಾಗಿ.
3. ಅಪರ ಆಯುಕ್ತರು, ಧಾರವಾಡ/ಕಲಬುರಗಿ ಆಯುಕ್ತಾಲಯರವರಿಗೆ ಸೂಕ್ತ ಕ್ರಮಕ್ಕಾಗಿ.
4. ನಿರ್ದೇಶಕರು, ಪ್ರಾಥಮಿಕ ಶಿಕ್ಷಣ/ಪ್ರೌಢ ಶಿಕ್ಷಣ/ ಅಲ್ಪ ಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯ/ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ/ಡಿ.ಎಸ್.ಇ.ಆರ್.ಟಿ./ಎಸ್.ಎಸ್.ಎ./ ಆರ್.ಎಂ.ಎಸ್.ಎ ರವರಿಗೆ ಮಾಹಿತಿಗಾಗಿ.
5. ಕಛೇರಿ ಪ್ರತಿ.